ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿ ನಿಲಯಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

65 (61) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ವಸತಿ ನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?